**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| **01.** | **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **: 1485** |
| **02.** | **ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು** | **: ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)** |
| **03.** | **ಉತ್ತರಿಸುವ ದಿನಾಂಕ** | **: 10/03/2022** |
| **04.** | **ಉತ್ತರಿಸುವ ಸಚಿವರು.** | **: ಗೃಹ ಸಚಿವರು.** |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಕಳೆದ 5 ವರ್ಷಗಳಿಂದ ದಾಖಲಾದ ಮಾನವಕಳ್ಳ ಸಾಗಣೆ ಪ್ರಕರಣಗಳೆಷ್ಟು;(ವಿವರ ನೀಡುವುದು)</td><td rowspan="2">ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ ದಾಖಲಾದ ಮಾನವ ಕಳ್ಳ ಸಾಗಣೆ ಪ್ರಕರಣಗಳು, ಸದರಿ ಪ್ರಕರಣಗಳಲ್ಲಿ ಆರೋಪಿಗಳನ್ನು ಬಂಧಿಸಲಾದ ಸಂಖ್ಯೆ ಮತ್ತು ಶಿಕ್ಷೆಯಾದ ಆರೋಪಿಗಳ ಸಂಖ್ಯೆಯ ವಿವರಗಳು ಈ ಕೆಳಕಂಡಂತಿದೆ.
<table>
<tr><th>ವರ್ಷ</th><th>ದಾಖಲಾದ ಪ್ರಕರಣಗಳ ಸಂಖ್ಯೆ</th><th>ಪ್ರಕರಣದಲ್ಲಿ ಆರೋಪಿಗಳನ್ನು ಬಂಧಿಸಲಾದ ಸಂಖ್ಯೆ</th><th>ಶಿಕ್ಷೆಯಾದ ಆರೋಪಿಗಳ ಸಂಖ್ಯೆ</th></tr>
<tr><td>2017</td><td>178</td><td>222</td><td>10</td></tr>
<tr><td>2018</td><td>146</td><td>185</td><td>0</td></tr>
<tr><td>2019</td><td>155</td><td>190</td><td>0</td></tr>
<tr><td>2020</td><td>119</td><td>136</td><td>0</td></tr>
<tr><td>2021</td><td>134</td><td>205</td><td>0</td></tr>
<tr><td>2022(ಫೆಬ್ರವರಿ)</td><td>31</td><td>34</td><td>0</td></tr>
</table></td></tr>
<tr><td>ಆ)</td><td>ಇದರಲ್ಲಿ ಎಷ್ಟು ಪ್ರಕರಣಗಳಲ್ಲಿ ಆರೋಪಿಗಳನ್ನು ಬಂಧಿಸಲಾಗಿದೆ; ಎಷ್ಟು ಆರೋಪಿಗಳಿಗೆ ಶಿಕ್ಷೆಯಾಗಿದೆ; (ವಿವರ ನೀಡುವುದು)</td></tr>
<tr><td>ಇ)</td><td>ಇತ್ತೀಚೆಗೆ ಇಂತಹ ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="2"><u>ರಾಜ್ಯದಲ್ಲಿ ಮಾನವ ಕಳ್ಳ ಸಾಗಾಣಿಕೆಯನ್ನು ತಡೆಗಟ್ಟಲು ರಾಜ್ಯ ಸರ್ಕಾರ ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.</u><br>• ಮಾನವ ಅಕ್ರಮ ಸಾಗಣಿಕೆಯನ್ನು ತಡೆಗಟ್ಟಲು, ರಾಜ್ಯ ಸಿ.ಐ.ಡಿ. ಘಟಕದಲ್ಲಿ ಆಂಟಿ ಹ್ಯೂಮನ್ ಟ್ರಾಫಿಕಿಂಗ್ ಸೆಲ್ ಅನ್ನು ಸ್ಥಾಪಿಸಲಾಗಿದೆ.<br>• ಎಡಿಜಿಪಿ ಮಟ್ಟದ ಅಧಿಕಾರಿಯೊಬ್ಬರನ್ನು, ರಾಜ್ಯ ಮಟ್ಟದ ನೊಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿರುತ್ತದೆ. ಇವರ ಅಧೀನದಲ್ಲಿ ಕಾರ್ಯನಿರ್ವಹಿಸಲು ಠಾಣಾ ಮಟ್ಟದಿಂದ ಜಿಲ್ಲಾಮಟ್ಟದವರೆಗೆ ನೊಡಲ್ ಅಧಿಕಾರಿಗಳನ್ನು ನೇಮಿಸಿ, ಅವರಿಗೆ ಸೂಕ್ತ ತರಬೇತಿ ನೀಡಲಾಗಿದೆ. ಹಾಲಿ ರಾಜ್ಯದಲ್ಲಿ 30 ಮಾನವ ಕಳ್ಳ ಸಾಗಾಣಿಕೆ ನಿಷೇಧ ಘಟಕಗಳು ಕಾರ್ಯನಿರ್ವಹಿಸುತ್ತಿವೆ.</td></tr>
<tr><td>ಈ)</td><td>ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕಟ್ಟುನಿಟ್ಟಿನ ಕ್ರಮಗಳೇನು? (ವಿವರ ನೀಡುವುದು)</td></tr>
</table>

| | | |
|---|---|---|
| | | • ಮಾನವ ಕಳ್ಳ ಸಾಗಾಣಿಕೆ ಪ್ರಕರಣದ ತನಿಖೆ ಸಂಬಂಧ ದಿನಾಂಕ:16.09.2020ರಲ್ಲಿ ನಿರ್ದಿಷ್ಟ ಕಾರ್ಯ ಸೂಚಿಯನ್ನು ರಾಜ್ಯದ ಎಲ್ಲಾ ಪೊಲೀಸ್ ಘಟಕಾಧಿಕಾರಿಗಳಿಗೆ ರವಾನಿಸಿ ಮಾನವ ಕಳ್ಳ ಸಾಗಾಣಿಕೆ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ಕಾನೂನು ರೀತ್ಯಾ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲು ಸೂಚಿಸಲಾಗಿರುತ್ತದೆ. |

**ಕಡತ ಸಂಖ್ಯೆ : ಹೆಚ್‌ಡಿ 20 ಪಿಸಿಕ್ಯೂ 2022**

(ಆರಗ ಜ್ಞಾನೇಂದ್ರ)
ಗೃಹ ಸಚಿವರು